ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ:53:ಆರ್‌ಆರ್‌ಸಿ:15(ಭಾ-1). ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:15-5-2015.

**ಸುತ್ತೋಲೆ**

ವಿಷಯ: ಕೆಆರ್‌ಆರ್‌ಡಿಎ ವತಿಯಿಂದ ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆಯಡಿ ಕೈಗೊಳ್ಳುವ ಕಾಮಗಾರಿಗಳನ್ನು ಗಾಂಧೀ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿ, ಸದರಿ ಕಾಮಗಾರಿಗಳನ್ನು ಪರಿವೀಕ್ಷಣೆ ಮಾಡಿ ಖಚಿತಪಡಿಸಿಕೊಳ್ಳುವ ಕುರಿತು.

ಉಲ್ಲೇಖ:-
1. ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ:16/35(2):ಆರ್‌ಆರ್‌ಸಿ:14, ದಿನಾಂಕ:21-5-2015.
2. ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ:16/35(2):ಆರ್‌ಆರ್‌ಸಿ:14, ದಿನಾಂಕ:20-8-2014.

*****

ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ-1 ಮತ್ತು 2ರಲ್ಲಿ ನಮ್ಮ ಗ್ರಾಮ ನಮ್ಮ ರಸ್ತೆ ಮತ್ತು ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ ಕಾಮಗಾರಿಗಳನ್ನು ವೀಕ್ಷಣೆ ಮಾಡಿದ ವರದಿಗಳನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಇವರುಗಳಿಗೆ ಸಲ್ಲಿಸುವಂತೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ವೃತ್ತ ಕಚೇರಿಗಳ ಅಧೀಕ್ಷಕ ಇಂಜಿನಿಯರ್‌ಗಳಿಗೆ ಮತ್ತು ನಮ್ಮ ಗ್ರಾಮ ನಮ್ಮ ರಸ್ತೆ ಮತ್ತು ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿ ರಸ್ತೆಗಳ ಅನುಷ್ಠಾನದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಸಲಹೆ ಮತ್ತು ಸೂಚನೆಗಳನ್ನು ಪಡೆದುಕೊಂಡು ಕಾರ್ಯನಿರ್ವಹಿಸಲು ಸೂಚಿಸುವಂತೆ ತಿಳಿಸಲಾಗಿರುತ್ತದೆ.

ಇನ್ನು ಮುಂದೆ ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆಯ ಪಾವತಿಗಾಗಿ ಸಲ್ಲಿಸುವ ಬಿಲ್ಲುಗಳನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್ ಇವರುಗಳು ರಸ್ತೆ ಕಾಮಗಾರಿಗಳ ದಾಖಲೆ ಪರಿಶೀಲಿಸಿ ಬಿಲ್ಲುಗಳ ಮೊತ್ತವು ಕಾಮಗಾರಿಗೆ ಅನುಗುಣವಾಗಿ ಸರಿಯಾಗಿರುವುದೆಂದು ಮತ್ತು ಬಿಲ್ಲು ಮೊತ್ತವು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿರುವುದನ್ನು ದೃಢೀಕರಿಸುವ ಕಾರ್ಯವನ್ನು ಮಾಡಲು ಸೂಚಿಸಲಾಗಿದೆ.

(ಬೂವನಹಳ್ಳಿನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ

1. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
2. ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಕೆಆರ್‌ಆರ್‌ಡಿಎ, ಗ್ರಾಮೀಣಾಭಿವೃದ್ಧಿ ಭವನ, 3ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು-9.
3. ಎಲ್ಲಾ ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತಗಳ ಅಧೀಕ್ಷಕ ಇಂಜಿನಿಯರ್‌ಗಳಿಗೆ.
4. ಎಲ್ಲಾ ಪಿಎಂಜಿಎಸ್‌ವೈ ಯೋಜನಾ ವಿಭಾಗಗಳ ಕಾರ್ಯಪಾಲಕ ಇಂಜಿನಿಯರ್‌ಗಳಿಗೆ.
5. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.